# National
# Kannada
# 08.04.2024 19.35 Hrs
## ಆಕಾಶವಾಣಿ, ಬೆಂಗಳೂರು
## ರಾಷ್ಟ್ರೀಯ ವಾರ್ತೆಗಳು

ಮುಖ್ಯಾಂಶಗಳು

1. ಬುಡಕಟ್ಟು ಜನರ ಜೀವನ ಮಟ್ಟ ಸುಧಾರಣೆಗೆ ಕೇಂದ್ರ ಸರ್ಕಾರದ ಆದ್ಯತೆ
2. ಕಾಂಗ್ರೆಸ್ ಪ್ರಣಾಳಿಕೆ ವಿರುದ್ಧ ಬಿಜೆಪಿ ನಾಯಕರ ಟೀಕೆ; ಚುನಾವಣಾ ಆಯೋಗಕ್ಕೆ ಕಾಂಗ್ರೆಸ್ ದೂರು
3. ಸೇನಾ ಪಡೆಗಳ ಸಾಮರ್ಥ್ಯ ವೃದ್ಧಿಗೆ ವಿಶೇಷ ಗಮನ ಅಗತ್ಯ; ರಕ್ಷಣಾ ಸಿಬ್ಬಂದಿ ಮುಖ್ಯಸ್ಥರ ಕರೆ
4. ಕರ್ನಾಟಕ ಸೇರಿ ದೇಶದ ಹಲವೆಡೆ ಬಿಸಿಲಿನ ತಾಪಮಾನ ಹೆಚ್ಚಳ – ಹವಾಮಾನ ಇಲಾಖೆ ಮುನ್ಸೂಚನೆ
5. ಐಪಿಎಲ್ ಟಿ–20 ಕ್ರಿಕೆಟ್; ಚೆನ್ನೈ ಸೂಪರ್ ಕಿಂಗ್ಸ್ – ಕೋಲ್ಕತ್ತಾ ನೈಟ್ ರೈಡರ್ಸ್ ನಡುವೆ ಹಣಾಹಣಿ

******************

ಬಿಜೆಪಿ ಹಿರಿಯ ನಾಯಕ ಹಾಗೂ ಪ್ರಧಾನಿ ನರೇಂದ್ರ ಮೋದಿ ಅವರಿಂದು ಛತ್ತೀಸ್‌ಗಡದ ಬಸ್ತಾರ್ ವಿಭಾಗದ ಆಮಾಬಾಲ್ ಗ್ರಾಮದಲ್ಲಿ ಏರ್ಪಡಿಸಿದ್ದ ಸಾರ್ವಜನಿಕ ಸಭೆಯ ಮೂಲಕ ಬಿಜೆಪಿ ಅಭ್ಯರ್ಥಿಗಳ ಪರವಾಗಿ ಮತಯಾಚನೆ ಮಾಡಿದರು.

ಈ ಸಂದರ್ಭದಲ್ಲಿ ಮಾತನಾಡಿದ ಅವರು, ದೇಶದಲ್ಲಿನ ಪ್ರತಿಯೊಂದು ಬುಡಕಟ್ಟು ಕುಟುಂಬಗಳ ಜೀವನ ಮಟ್ಟ ಸುಧಾರಣೆ ಮಾಡುವುದೇ ಮೋದಿ ಗ್ಯಾರೆಂಟಿ ಆಗಿದೆ ಎಂದು ತಿಳಿಸಿದರು.

ದೇಶದ ಅಭಿವೃದ್ಧಿ ಜೊತೆಗೆ ಪ್ರತಿಯೊಂದು ಕುಟುಂಬವನ್ನು ಸಮೃದ್ಧಿಗೊಳಿಸುವುದೇ ತಮ್ಮ ಗುರಿಯಾಗಿದೆ. ಕಳೆದ 10 ವರ್ಷಗಳ ಅವಧಿಯಲ್ಲಿ ಕೇಂದ್ರದಲ್ಲಿನ ಬಿಜೆಪಿ ಸರ್ಕಾರ ಬಡಜನರ ಕಲ್ಯಾಣಕ್ಕಾಗಿ ಹಲವಾರು ಯೋಜನೆಗಳನ್ನು ಜಾರಿಗೊಳಿಸಿದೆ ಎಂದರು.

ಕಳೆದ 10 ವರ್ಷಗಳಲ್ಲಿ ದೇಶದಲ್ಲಿನ 25 ಕೋಟಿ ಜನರು ಬಡತನದಿಂದ ಹೊರ ಬಂದಿದ್ದಾರೆ. ಉಚಿತ ಪಡಿತರ ಮತ್ತು ಆಯುಷ್ಮಾನ್‌ನಂತಹ ಯೋಜನೆಗಳ ಮೂಲಕ ಬಡವರ ಖರ್ಚು ವೆಚ್ಚ ಕಡಿಮೆ ಮಾಡಲಾಗಿದೆ ಈ ಮೂಲಕ ಅವರ ಉಳಿತಾಯ ಹೆಚ್ಚಾಗಿದೆ ಎಂದರು.

******************

ದೇಶದ ಸರ್ವಾಂಗೀಣ ಅಭಿವೃದ್ಧಿ ಎನ್‌ಡಿಎ ಸರ್ಕಾರದ ಪ್ರಥಮ ಆದ್ಯತೆಯಾಗಿದೆ ಎಂದು ಬಿಜೆಪಿಯ ಮಾಜಿ ಅಧ್ಯಕ್ಷ ಹಾಗೂ ಕೇಂದ್ರ ಸಚಿವ ರಾಜನಾಥ್ ಸಿಂಗ್ ಹೇಳಿದ್ದಾರೆ.

ತಮಿಳುನಾಡಿನ ನಮಕಲ್‌ನಲ್ಲಿ ಏರ್ಪಡಿಸಿದ್ದ ರೋಡ್ ಶೋನಲ್ಲಿ ಪಾಲ್ಗೊಂಡು ಮಾತನಾಡಿದ ಅವರು, ಕಳೆದ 10 ವರ್ಷಗಳಲ್ಲಿ ದೇಶದ ಆರ್ಥಿಕತೆ ಜೊತೆಗೆ ಕೃಷಿ ಹಾಗೂ ಮೂಲಭೂತ ಸೌಕರ್ಯ ಅಭಿವೃದ್ಧಿಯಲ್ಲಿ ಪ್ರಗತಿ ಕಂಡು ಬಂದಿದೆ ಎಂದರು.

ಭಾರತ ಜಾಗತಿಕವಾಗಿ ಪ್ರಬಲ ಆರ್ಥಿಕ ಶಕ್ತಿಯಾಗಿ ಹೊರಹೊಮ್ಮಲಿದೆ. ಪ್ರಸ್ತುತ ಈ ವಿಚಾರದಲ್ಲಿ ಮೂರನೇ ಸ್ಥಾನದಲ್ಲಿದೆ ಎಂದರು.

******************

ಎನ್‌ಡಿಎ ಸರ್ಕಾರದ ಅವಧಿಯಲ್ಲಿ ಅಸಾಧಾರಣ ಸಾಧನೆ ಮಾಡಲಾಗಿದ್ದು, ಕಳೆದ 10 ವರ್ಷಗಳ ಅವಧಿಯಲ್ಲಿ ಅತ್ಯಧಿಕ ಮೊತ್ತದ ವಿದೇಶಿ ನೇರ ಬಂಡವಾಳ ಹರಿದು ಬಂದಿದೆ ಎಂದು ಬಿಜೆಪಿ ಹಿರಿಯ ನಾಯಕ ಮತ್ತು ಕೇಂದ್ರ ಸಚಿವ ಅನುರಾಗ್ ಸಿಂಗ್ ಠಾಕೂರ್ ಹೇಳಿದ್ದಾರೆ.

ಚೆನ್ನೈನ ವಿಮಾನ ನಿಲ್ದಾಣದಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅನುರಾಗ್ ಸಿಂಗ್ ಠಾಕೂರ್, ಎನ್‌ಡಿಎ ಆಡಳಿತಾವಧಿಯಲ್ಲಿ ಜಾರಿಗೆ ತಂದಿರುವ ವಿವಿಧ ಯೋಜನೆಗಳಿಂದ ಸಮಾಜದ ಎಲ್ಲ ವರ್ಗದ ಜನರಿಗೆ ಪ್ರಯೋಜನವಾಗಿದೆ ಹಾಗೂ ಆರ್ಥಿಕ ಬೆಳವಣಿಗೆಯೂ ಅಧಿಕವಾಗಿದೆ ಎಂದು ಹೇಳಿದರು.

ಮೀನುಗಾರರ ಅನುಕೂಲಕ್ಕಾಗಿ ಪ್ರಧಾನಿ ನರೇಂದ್ರ ಮೋದಿ ವಿವಿಧ ಯೋಜನೆಗಳನ್ನು ಜಾರಿಗೆ ತಂದಿದ್ದಾರೆ ಎಂದರು. ಕಚ್ಚತೀವು ದ್ವೀಪವನ್ನು ಡಿಎಂಕೆ ಮತ್ತು ಕಾಂಗ್ರೆಸ್ ಶ್ರೀಲಂಕಾಗೆ ಬಿಟ್ಟುಕೊಟ್ಟಿವೆ ಎಂದು ಆರೋಪಿಸಿದ ಸಚಿವರು, ಇದರ ಹಿಂದಿನ ಕಾರಣಗಳೇನು ಎಂಬುದನ್ನು ತಿಳಿಯಲು ಜನತೆ ಬಯಸುತ್ತಾರೆ ಎಂದರು.

ಈ ಮಧ್ಯೆ, ಪ್ರತಿಕ್ರಿಯಿಸಿರುವ ಡಿಎಂಕೆ ಸಂಸದೆ ಕನಿಮೌಳಿ ಚುನಾವಣಾ ಸಂದರ್ಭದಲ್ಲಿ ಕಚ್ಚತೀವು ವಿಚಾರವನ್ನು ರಾಜಕೀಯ ಲಾಭಗಳಿಸುವ ಉದ್ದೇಶದಿಂದ ಬಿಜೆಪಿ ಪ್ರಸ್ತಾಪಿಸುತ್ತಿದೆ ಎಂದು ಹೇಳಿದ್ದಾರೆ.

ಚೆನ್ನೈನ ವಿಮಾನ ನಿಲ್ದಾಣದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಈ ವಿಚಾರದ ಬಗ್ಗೆ ಡಿಎಂಕೆ ಸುಮ್ಮನೆ ಕುಳಿತಿಲ್ಲ ಈ ಬಗ್ಗೆ ಪಕ್ಷ ಹಲವಾರು ಬಾರಿ ಕೇಂದ್ರ ಸರ್ಕಾರದ ಗಮನ ಸೆಳೆದಿದೆ ಎಂದು ತಿಳಿಸಿದರು.

*****************

ಕಾಂಗ್ರೆಸ್‌ನ ತಾರಾ ಪ್ರಚಾರಕರಾಗಿರುವ ರಾಹುಲ್ ಗಾಂಧಿ ಅವರಿಂದು ಮಧ್ಯಪ್ರದೇಶದ ಸಿಯೋನಿ ಜಿಲ್ಲೆಯ ಧಾನೌರಾದಲ್ಲಿ ಸಾರ್ವಜನಿಕ ಸಭೆಯನ್ನು ಉದ್ದೇಶಿಸಿ ಭಾಷಣ ಮಾಡಿದರು.

ಬುಡಕಟ್ಟು ಸಮುದಾಯದವರು ಈ ದೇಶದ ಮೊದಲ ಮಾಲೀಕರಾಗಿದ್ದಾರೆ. ಕಾಂಗ್ರೆಸ್ ಪಕ್ಷ ಅವರನ್ನು ಆದಿವಾಸಿಗಳೆಂದು ಕರೆದರೆ, ಬಿಜೆಪಿ, ಪ್ರಧಾನಿ ನರೇಂದ್ರ ಮೋದಿ ಹಾಗೂ ಗೃಹ ಸಚಿವ ಅಮಿತ್ ಶಾ ವನವಾಸಿಗಳೆಂದು ಕರೆಯುತ್ತಾರೆ ಎಂದು ಟೀಕಿಸಿದರು.

ಈ ಎರಡೂ ಪದಗಳ ಬಳಕೆ ಹಿಂದೆ ಎರಡೂ ವಿಭಿನ್ನ ಚಿಂತನೆಗಳಿವೆ ಎಂದು ಅವರು ಅಭಿಪ್ರಾಯಪಟ್ಟರು.

*****************

ಕಾಂಗ್ರೆಸ್ ಪಕ್ಷದ ಚುನಾವಣಾ ಪ್ರಣಾಳಿಕೆ ಕುರಿತು ಹಿರಿಯ ಬಿಜೆಪಿ ನಾಯಕ ಹಾಗೂ ಪ್ರಧಾನಿ ನರೇಂದ್ರ ಮೋದಿ ನೀಡಿರುವ ಹೇಳಿಕೆ ವಿರುದ್ಧ ಕಾಂಗ್ರೆಸ್ ಚುನಾವಣಾ ಆಯೋಗಕ್ಕೆ ಇಂದು ದೂರು ನೀಡಿದೆ.

ಪಕ್ಷದ ಹಿರಿಯ ನಾಯಕ ಸಲ್ಮಾನ್ ಕುರ್ಷಿದ್ ನೇತೃತ್ವದ ನಾಯಕ ನಿಯೋಗ ನವದೆಹಲಿಯಲ್ಲಿ ಚುನಾವಣಾ ಆಯೋಗವನ್ನು ಭೇಟಿ ಮಾಡಿ ದೂರು ದಾಖಲಿಸಿದೆ.

ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಸಲ್ಮಾನ್ ಕುರ್ಷಿದ್ ಪಕ್ಷದ ಪ್ರಣಾಳಿಕೆ ಮುಸ್ಲಿಂ ಲೀಗ್‌ನ ಮುಖವಾಣಿಯಂತಿದೆ ಎಂದು ಪ್ರಧಾನಿ ನರೇಂದ್ರ ಮೋದಿ ಮಾಡಿರುವ ಆರೋಪಕ್ಕೆ ತೀವ್ರ ಆಕ್ಷೇಪ ವ್ಯಕ್ತಪಡಿಸಿದರು.

ಚುನಾವಣಾ ಆಯೋಗ ಈ ವಿಚಾರವನ್ನು ಗಂಭೀರವಾಗಿ ಪರಿಗಣಿಸಿ ಸೂಕ್ತ ಕ್ರಮ ಕೈಗೊಳ್ಳಬೇಕು ಎಂದು ಅವರು ಒತ್ತಾಯಿಸಿದರು.

ಈ ಮಧ್ಯೆ ಪಕ್ಷದ ವಕ್ತಾರ ಪವನ್ ಖೇರಾ, ವಿಶ್ವ ವಿದ್ಯಾಲಯಗಳಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರ ಬಿತ್ತಿ ಪತ್ರಗಳಿರುವುದಕ್ಕೆ ತೀವ್ರ ಆಕ್ಷೇಪ ವ್ಯಕ್ತಪಡಿಸಿದರು.

*****************

ಚುನಾವಣಾ ಬಾಂಡ್‌ಗಳ ಹೆಸರಿನಲ್ಲಿ ಕೇಂದ್ರದಲ್ಲಿನ ಬಿಜೆಪಿ ಸರ್ಕಾರ ಭ್ರಷ್ಟಾಚಾರದಲ್ಲಿ ಭಾಗಿಯಾಗಿದೆ ಎಂದು ಆಮ್ ಆದ್ಮಿ ಪಕ್ಷದ ಮುಖಂಡ ಸಂಜಯ್ ಸಿಂಗ್ ಆರೋಪಿಸಿದ್ದಾರೆ.

ದೆಹಲಿಯಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಬಿಜೆಪಿಗೆ ದೇಣಿಗೆ ನೀಡಿದ ಕಂಪನಿಗಳಿಗೆ ತೆರಿಗೆ ವಿನಾಯಿತಿ ನೀಡಲಾಗಿದೆ ಎಂದು ಟೀಕಿಸಿದ್ದಾರೆ. ದೆಹಲಿಯ ಅಬಕಾರಿ ನೀತಿ ಪ್ರಕರಣದಲ್ಲಿ ಬಂಧಿತರಾಗಿದ್ದ ಆಪ್ ಮುಖಂಡ ತಿಹಾರ್ ಜೈಲಿನಿಂದ ಕಳೆದ ವಾರ ಜಾಮೀನು ಮೇಲೆ ಬಿಡುಗಡೆಯಾದ ನಂತರ ಬಿಜೆಪಿ ವಿರುದ್ಧ ಟೀಕೆ ಮಾಡುವುದನ್ನು ಮುಂದುವರೆಸಿದ್ದಾರೆ.

*****************

ಮೂರೂ ಸೇನಾ ಪಡೆಗಳ ಸುಧಾರಣೆಗೆ ಹೊಸ ಚಿಂತನೆ, ಆಲೋಚನೆ, ಉಪಕ್ರಮಗಳು, ಜಂಟಿಯಾಗಿ ಮುನ್ನಡೆಯುವುದು ಮತ್ತು ಏಕೀಕರಣ ಪ್ರಯತ್ನಗಳ ಕುರಿತು ಪರಿವರ್ತನ್ ಚಿಂತನ್ ಸಮಾವೇಶ ದೆಹಲಿಯಲ್ಲಿಂದು ನಡೆಯಿತು. ದಿನವಿಡೀ ನಡೆದ ಸಮಾವೇಶದ ಅಧ್ಯಕ್ಷತೆಯನ್ನು ರಕ್ಷಣಾ ಸಿಬ್ಬಂದಿ ಮುಖ್ಯಸ್ಥ ಜನರಲ್ ಅನಿಲ್ ಚೌಹಾಣ್ ವಹಿಸಿದ್ದರು.
ಮೂರು ಸೇನಾ ಪಡೆಗಳ ಮುಖ್ಯಸ್ಥರು ಮಿಲಿಟರಿ ವ್ಯವಹಾರಗಳ ಇಲಾಖೆಯ ಮುಖ್ಯಸ್ಥರು ಏಕೀಕೃತ ರಕ್ಷಣಾ ಸಿಬ್ಬಂದಿಯನ್ನೊಳಗೊಂಡ ಮೊದಲ ಸಮಾವೇಶ ಇದಾಗಿದೆ.
ಮೂರು ಪಡೆಗಳು ಜಂಟಿಯಾಗಿ ಮುಂದುವರೆಯುವುದರ ಜೊತೆಗೆ ಏಕೀಕರಣವನ್ನು ಸಾಧಿಸುವ ಉದ್ದೇಶದಿಂದ ಆಯೋಜಿಸಿರುವ ಸಮಾವೇಶದಲ್ಲಿ ಸೇನಾಪಡೆಗಳ ಹಿರಿಯ ಅಧಿಕಾರಿಗಳು ಪಾಲ್ಗೊಂಡಿದ್ದು, ಅವರ ಅನುಭವಗಳನ್ನು ಹಂಚಿಕೊಂಡರು.
ಸಮಾವೇಶದಲ್ಲಿ ಮಾತನಾಡಿದ ಜನರಲ್ ಅನಿಲ್ ಚೌಹಾಣ್, ಸೇನಾ ಪಡೆಗಳು ಜಂಟಿ ಸಂಸ್ಕೃತಿಯನ್ನು ಅಳವಡಿಸಿಕೊಳ್ಳುವ ಅಗತ್ಯತೆಯನ್ನು ಪ್ರತಿಪಾದಿಸಿದರು. ಪ್ರತಿಯೊಂದು ಸೇನಾ ವಿಭಾಗ ಸಮರ ಎದುರಿಸುವ ಸಾಮರ್ಥ್ಯ ಹಾಗೂ ಕಾರ್ಯದಕ್ಷತೆಯನ್ನು ಹೆಚ್ಚಿಸಿಕೊಳ್ಳಲು ರಚನಾತ್ಮಕ ಕಾರ್ಯಕ್ರಮ ರೂಪಿಸುವ ಅವಶ್ಯಕತೆ ಇದೆ ಎಂದು ಒತ್ತಿ ಹೇಳಿದರು.
ಯೋಜಿತ ಭವಿಷ್ಯದ ಯುದ್ಧಗಳಿಗೆ ಸಿದ್ಧವಾಗಲು ಭಾರತೀಯ ಸಶಸ್ತ್ರ ಪಡೆಗಳು ತಮ್ಮ ಅನ್ವೇಷಣೆಯಲ್ಲಿ ಪ್ರಮುಖ ಪರಿವರ್ತಕ ಬದಲಾವಣೆಯನ್ನು ಕೈಗೊಂಡಿದ್ದು, ಮೂರು ಪಡೆಗಳನ್ನು ಸಕ್ರಿಯಗೊಳಿಸಲು ಜಂಟಿ ಮತ್ತು ಏಕೀಕರಣ ಉತ್ತೇಜಿಸಲು ಹಲವು ಕ್ರಮಗಳನ್ನು ರೂಪಿಸಲಾಗುವುದು ಎಂದು ರಕ್ಷಣಾ ಸಚಿವಾಲಯ ತಿಳಿಸಿದೆ.

*****************

ಕಾನೂನುಬಾಹಿರವಾಗಿ ನಡೆದುಕೊಂಡ ಬಿಜೆಪಿಯ ಆರು ಶಾಸಕರನ್ನು ದೆಹಲಿ ವಿಧಾನಸಭೆಯಿಂದ ಹೊರ ಹಾಕಲಾಗಿದೆ. ಇದಕ್ಕೂ ಮುನ್ನ ಇಂದು ಬೆಳಗ್ಗೆ ವಿಧಾನಸಭೆ ಅಧಿವೇಶನ ಆರಂಭವಾದಾಗ ದೆಹಲಿ ಜಲ ಮಂಡಳಿಯ ವಿಚಾರ ಕುರಿತು ಚರ್ಚೆಯನ್ನು ಕೈಗೆತ್ತಿಕೊಳ್ಳಲಾಗಿತ್ತು.

ಪ್ರತಿಪಕ್ಷದ ನಾಯಕ ರಾಮ್‌ವೀರ್ ಸಿಂಗ್ ಬಿದೂರಿ ದೆಹಲಿ ಜಲಮಂಡಳಿಯಲ್ಲಿ ಭಾರೀ ಭ್ರಷ್ಟಾಚಾರ ನಡೆದಿದ್ದು, ಈ ಕುರಿತು ಚರ್ಚೆಗೆ ಅವಕಾಶ ಮಾಡಿಕೊಡಬೇಕೆಂದು ಒತ್ತಾಯಿಸಿದರು. ಇದಕ್ಕೆ ಸಭಾಧ್ಯಕ್ಷ ರಾಮ್‌ನಿವಾಸ್ ಗೋಯಲ್ ಅವಕಾಶ ನೀಡಲಿಲ್ಲ. ಇದರಿಂದ ಅಸಮಾಧಾನಗೊಂಡ ಬಿಜೆಪಿ ಶಾಸಕರು ಸಭಾಧ್ಯಕ್ಷರ ಪೀಠದ ಮುಂದಿನ ಬಾವಿಗಿಳಿದು ಆಪ್ ಸರ್ಕಾರದ ವಿರುದ್ಧ ಘೋಷಣೆ ಕೂಗಿದರು.

ಪ್ರತಿಭಟನೆ ಕೈಬಿಟ್ಟು ಸುಗಮ ಕಲಾಪಕ್ಕೆ ಅವಕಾಶ ಮಾಡಿಕೊಡಬೇಕೆಂದು ಸಭಾಧ್ಯಕ್ಷರು ಪದೇ ಪದೇ ಮಾಡಿದ ಮನವಿಗೆ ಓಗೊಡದ ಪ್ರತಿಪಕ್ಷ ಸದಸ್ಯರು ಪ್ರತಿಭಟನೆ ಮುಂದುವರೆಸಿದರು. ಬಳಿಕ ಸಭಾಧ್ಯಕ್ಷರು, ಪ್ರತಿಭಟನಾನಿರತ ಸದಸ್ಯರನ್ನು ಸದನದಿಂದ ಹೊರಹಾಕುವಂತೆ ಮಾರ್ಷಲ್‌ಗಳಿಗೆ ಸೂಚಿಸಿದರು.

ತದನಂತರ ಬಿಜೆಪಿ ಶಾಸಕರು ವಿಧಾನಸಭೆಯ ಹೊರಗೂ ಪ್ರತಿಭಟನೆ ನಡೆಸಿದರು.

*****************

ಕಾನೂನುಬಾಹಿರವಾಗಿ ನಡೆದುಕೊಂಡ ಬಿಜೆಪಿಯ ಆರು ಶಾಸಕರನ್ನು ದೆಹಲಿ ವಿಧಾನಸಭೆಯಿಂದ ಹೊರ ಹಾಕಲಾಗಿದೆ. ಇದಕ್ಕೂ ಮುನ್ನ ಇಂದು ಬೆಳಗ್ಗೆ ವಿಧಾನಸಭೆ ಅಧಿವೇಶನ ಆರಂಭವಾದಾಗ ದೆಹಲಿ ಜಲ ಮಂಡಳಿಯ ವಿಚಾರ ಕುರಿತು ಚರ್ಚೆಯನ್ನು ಕೈಗೆತ್ತಿಕೊಳ್ಳಲಾಗಿತ್ತು.

ಪ್ರತಿಪಕ್ಷದ ನಾಯಕ ರಾಮ್‌ವೀರ್ ಸಿಂಗ್ ಬಿದೂರಿ ದೆಹಲಿ ಜಲಮಂಡಳಿಯಲ್ಲಿ ಭಾರೀ ಭ್ರಷ್ಟಾಚಾರ ನಡೆದಿದ್ದು, ಈ ಕುರಿತು ಚರ್ಚೆಗೆ ಅವಕಾಶ ಮಾಡಿಕೊಡಬೇಕೆಂದು ಒತ್ತಾಯಿಸಿದರು. ಇದಕ್ಕೆ ಸಭಾಧ್ಯಕ್ಷ ರಾಮ್‌ನಿವಾಸ್ ಗೋಯಲ್ ಅವಕಾಶ ನೀಡಲಿಲ್ಲ. ಇದರಿಂದ ಅಸಮಾಧಾನಗೊಂಡ ಬಿಜೆಪಿ ಶಾಸಕರು ಸಭಾಧ್ಯಕ್ಷರ ಪೀಠದ ಮುಂದಿನ ಬಾವಿಗಿಳಿದು ಆಪ್ ಸರ್ಕಾರದ ವಿರುದ್ಧ ಘೋಷಣೆ ಕೂಗಿದರು.

ಪ್ರತಿಭಟನೆ ಕೈಬಿಟ್ಟು ಸುಗಮ ಕಲಾಪಕ್ಕೆ ಅವಕಾಶ ಮಾಡಿಕೊಡಬೇಕೆಂದು ಸಭಾಧ್ಯಕ್ಷರು ಪದೇ ಪದೇ ಮಾಡಿದ ಮನವಿಗೆ ಓಗೊಡದ ಪ್ರತಿಪಕ್ಷ ಸದಸ್ಯರು ಪ್ರತಿಭಟನೆ ಮುಂದುವರೆಸಿದರು. ಬಳಿಕ ಸಭಾಧ್ಯಕ್ಷರು, ಪ್ರತಿಭಟನಾನಿರತ ಸದಸ್ಯರನ್ನು ಸದನದಿಂದ ಹೊರಹಾಕುವಂತೆ ಮಾರ್ಷಲ್‌ಗಳಿಗೆ ಸೂಚಿಸಿದರು.

ತದನಂತರ ಬಿಜೆಪಿ ಶಾಸಕರು ವಿಧಾನಸಭೆಯ ಹೊರಗೂ ಪ್ರತಿಭಟನೆ ನಡೆಸಿದರು.

******************

ಕರ್ನಾಟಕ ಸೇರಿದಂತೆ ದೇಶದ ವಿವಿಧ ಭಾಗಗಳಲ್ಲಿ ಮುಂದಿನ 24 ಗಂಟೆಗಳು ಹಾಗೂ ನಂತರದ ಅವಧಿಯಲ್ಲಿ ಬಿಸಿಗಾಳಿಯ ತೀವ್ರತೆ ಹೆಚ್ಚಾಗಲಿದೆ ಎಂದು ಭಾರತೀಯ ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ.

ಕರ್ನಾಟಕದ ಉತ್ತರ ಒಳನಾಡು ಆಂಧ್ರಪ್ರದೇಶದ ಕರಾವಳಿ ಪ್ರದೇಶ, ಯಾನಂ, ರಾಯಲಸೀಮಾ, ತೆಲಂಗಾಣಗಳಲ್ಲಿ ತಾಪಮಾನ ಹೆಚ್ಚಾಗಲಿದ್ದು, ಬಿಸಿಗಾಳಿ ಮುಂದುವರೆಯಲಿದೆ. ಅದೇ ರೀತಿ ತಮಿಳುನಾಡು ಪಾಂಡಿಚೆರಿ, ಕಾರೈಕಲ್, ಕೇರಳ ಮತ್ತು ಗುಜರಾತ್‌ನ ಕರಾವಳಿ ಪ್ರದೇಶಗಳಲ್ಲಿ ಬಿಸಿಲಿನ ತಾಪಮಾನ ಹೆಚ್ಚಾಗಲಿದೆ ಎಂದು ಇಲಾಖೆ ತಿಳಿಸಿದೆ.

ಮತ್ತೊಂದೆಡೆ ಮುಂದಿನ ಏಳು ದಿನಗಳ ಅವಧಿಯಲ್ಲಿ ಪಶ್ಚಿಮ ಬಂಗಾಳ, ಸಿಕ್ಕಿಂ, ಅಸ್ಸಾಂ, ಮೇಘಾಲಯ, ನಾಗಾಲ್ಯಾಂಡ್, ಮಣಿಪುರ, ಮಿಜೋರಾಂ ಮತ್ತು ತ್ರಿಪುರಗಳಲ್ಲಿ ಸಾಧಾರಣದಿಂದ ಕೂಡಿದ ಹಗುರ ಮಳೆಯಾಗುವ ಸಾಧ್ಯತೆ ಇದೆ ಎಂದು ಹವಾಮಾನ ಕಚೇರಿ ತಿಳಿಸಿದೆ. ಅಲದೇ, ಮಧ್ಯಪ್ರದೇಶದ ಪೂರ್ವ ಮತ್ತು ಪಶ್ಚಿಮ ಭಾಗ, ಛತ್ತೀಸ್‌ಗಡ, ವಿದರ್ಭ, ಮರಾಠವಾಡ ಮತ್ತು ಮಹಾರಾಷ್ಟ್ರದ ಮಧ್ಯಭಾಗದಲ್ಲಿ ಸಾಧಾರಣದಿಂದ ಕೂಡಿದ ಹಗುರ ಮಳೆಯಾಗುವ ಸಂಭವವಿದೆ ಎಂದು ಹೇಳಲಾಗಿದೆ.

******************

ಕರ್ನಾಟಕ ಸೇರಿದಂತೆ ದೇಶದ ಹಲವೆಡೆ ನಾಳೆ ವಸಂತ ಋತುವಿನ ಆಗಮನದ ಸಂಕೇತ ಹಾಗೂ ಹೊಸ ವರ್ಷಾಚರಣೆ ಪ್ರತೀಕವಾದ ಚಂದ್ರಮಾನ ಯುಗಾದಿ ಹಬ್ಬವನ್ನು ವಿವಿಧ ಹೆಸರುಗಳಲ್ಲಿ ಸಡಗರ – ಸಂಭ್ರಮದಿಂದ ಆಚರಿಸಲಾಗುವುದು.

ಯುಗಾದಿ, ಚೈತ್ರ ಶುಕ್ಲಾದಿ, ಗುಡಿಪಡ್ವಾ, ಚೇತಿಚಾಂದ್, ನವ್ರೇಹ್ ಮತ್ತು ಸಜಿಬು, ಚೈರೋಬ ಹೆಸರುಗಳಲ್ಲಿ ಹಬ್ಬವನ್ನು ಆಚರಿಸಲಾಗುವುದು ಇದರ ಅಂಗವಾಗಿ ರಾಷ್ಟ್ರಪತಿ, ಉಪರಾಷ್ಟ್ರಪತಿ ಸೇರಿದಂತೆ ಹಲವು ಗಣ್ಯರು ದೇಶದ ಜನತೆಗೆ ಶುಭಾಶಯ ಕೋರಿದ್ದಾರೆ.

******************

ಐಪಿಎಲ್ ಟಿ-20 ಕ್ರಿಕೆಟ್‌ನಲ್ಲಿಂದು ಚೆನ್ನೈನ ಎಂ.ಎ.ಚಿದಂಬರಂ ಕ್ರೀಡಾಂಗಣದಲ್ಲಿ ನಡೆಯಲಿರುವ ಪಂದ್ಯದಲ್ಲಿ ಚೆನ್ನೈ ಸೂಪರ್ ಕಿಂಗ್ಸ್ ಹಾಗೂ ಕೋಲ್ಕತ್ತಾ ನೈಟ್ ರೈಡರ್ಸ್ ತಂಡಗಳು ಮುಖಾಮುಖಿಯಾಗಿವೆ.

ಟಾಸ್ ಗೆದ್ದ ಚೆನ್ನೈ ಸೂಪರ್ ಕಿಂಗ್ಸ್ ತಂಡ ಫೀಲ್ಡಿಂಗ್ ಆಯ್ಕೆ ಮಾಡಿಕೊಂಡಿದೆ. ಇತ್ತೀಚಿನ ವರದಿ ಬಂದಾಗ 3 ಓವರ್‌ಗಳಲ್ಲಿ 1 ವಿಕೆಟ್ ನಷ್ಟಕ್ಕೆ 1 ರನ್ ಗಳಿಸಿ ಆಡುತ್ತಿದೆ.